**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ. ಹುಣಸೂರು.**

**ಸಿ.ಸಿ. ಸಂಖ್ಯೆಃ 362/2020**

**ಸಾಕ್ಷಿಯನ್ನು ದಿಃ 08.01.2026 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

| | | | |
|---|---|---|---|
| ಹೆಸರು | ಎಸ್.ಬಿ ನವೀನ್ ಗೌಡ | ಸಿಡಬ್ಲ್ಯೂ37 | ಪಿಡಬ್ಲ್ಯೂ18 |
| ತಂದೆಯ ಹೆಸರು | ಬೆಟ್ಟರಾಮ | | |
| ವಯಸ್ಸು | 42 ವರ್ಷ | | |
| ಕೆಲಸ | ಸಿ.ಪಿ.ಐ ಅಮೃತೂರು | | |
| ವಾಸಸ್ಥಳ | ಕುಣಿಗಲ್ | | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರವರಿಂದಃ**

ನಾನು ದಿಃ 20.06.2016 ರಿಂದ 23.12.2017 ರ ವರೆಗೆ ಬಿಳಿಕೆರೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 14.11.2017 ರಂದು ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಬೆಳಿಗ್ಗೆ 8.10 ರ ಸಮಯದಲ್ಲಿ ಚಾಸಾ 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 327/2017 ರಲ್ಲಿ ಕಲಂ 279, 337, 304 ಎ ಐಪಿಸಿ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರ.ವ.ವರದಿಯನ್ನು ಮಾನ್ಯ ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಗಳಿಗೂ ನಿವೇದಿಸಿಕೊಂಡಿರುತ್ತೇನೆ. ನಿಪಿ. 1 ರ ದೂರಿನಲ್ಲಿರುವ ಸಾಕ್ಷಿ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ. 1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ. 45 ಎಂದು,

ಸಾಕ್ಷಿಯ ಸಹಿಯನ್ನು ನಿಪಿ. 45(ಎ) ಎಂದು ಗುರುತಿಸಲಾಯಿತು. ಸದರಿ ಪ್ರಕರಣವು ಘೋರ ಪ್ರಕರಣವಾದ ಕಾರಣ ಕಡತವನ್ನು ಚಾಸಾ 38 ರವರಿಗೆ ನಿವೇದಿಸಿಕೊಂಡಿರುತ್ತೇನೆ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಈ.ಬಿ.ಆರ್ ವಕೀಲರಿಂದಃ**

ದೂರನ್ನು ನೀಡಿದ ದಿನಾಂಕ ಮತ್ತು ಸಮಯದಲ್ಲಿ ಪಿರ್ಯಾದುದಾರರು ನಮ್ಮ ಠಾಣೆಗೆ ಬಂದಿರಲಿಲ್ಲ ಎಂದರೆ ಸರಿಯಲ್ಲ. ದೂರಿನಲ್ಲಿ ಬರೆದಿರುವ ವಿಚಾರ ನನಗೆ ಸಂಪೂರ್ಣ ತಿಳಿದಿರುತ್ತದೆ. ಸದರಿ ದೂರಿನ ಅಪಘಾತವು ಕೇವಲ ಒಂದು ವಾಹನದಿಂದ ಆಗಿರುತ್ತದೆ. ಮೃತರ ಕುಟುಂಬಕ್ಕೆ ಪರಿಹಾರ ಪಡೆಯಲು ಅನುಕೂಲವಾಗಲಿ ಎಂದು ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು).

ಓ.ಹೇ.ಕೇ.ಸ.ಇದೆ.,

(ಭಾಗ್ಯಮ್ಮ)
ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆ.ಎಂ.ಎಫ್.ಸಿ.ಹುಣಸೂರು.